**All India Radio: Bangalore**
**Regional Bulletin In Kannada**
**25.02.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**25.02.2025 / 2.30 p.m.**
**<><><><>**

ಮುಖ್ಯಾಂಶಗಳು

1. ಬೆಂಗಳೂರಿನಲ್ಲಿ ಇದೇ ೨೭ ರಿಂದ ಮೂರು ದಿನಗಳ ಗೆಫೆಕ್ಸ್ ಸಮ್ಮೇಳನ ; ಸಚಿವ ಪ್ರಿಯಾಂಕ್ ಖರ್ಗೆ
2. ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಭೇಟಿ ಮಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ; ನೆನಗುದಿಗೆ ಬಿದ್ದಿರುವ ಯೋಜನೆಗಳಿಗೆ ಅನುಮತಿ ನೀಡುವಂತೆ ಮನವಿ
3. ಗ್ಯಾರಂಟಿ ಯೋಜನೆಗಳ ಪುನರ್ ಪರಿಶೀಲನೆಗೆ ಸರ್ಕಾರದ ಹಂತದಲ್ಲೇ ನಿರ್ಧಾರ - ಗೃಹ ಸಚಿವ ಡಾ. ಜಿ. ಪರಮೇಶ್ವರ್
4. ಸ್ಥಳೀಯ ಮಟ್ಟದಲ್ಲಿ ಕೆಲಸ ಮಾಡುವವರಿಗೆ ಮಾತ್ರ ಕಾಂಗ್ರೆಸ್ ಪಕ್ಷದಲ್ಲಿ ಜವಾಬ್ದಾರಿ ನೀಡಲು ನಿರ್ಧಾರ
5. ಬೆಳಗಾವಿಯಲ್ಲಿ ನಿರ್ವಾಹಕರ ಮೇಲಿನ ಹಲ್ಲೆ ಪ್ರಕರಣ ; ಕನ್ನಡ ರಕ್ಷಣಾ ವೇದಿಕೆ ಕಾರ್ಯಕರ್ತರಿಂದ ಪ್ರತಿಭಟನೆ

<><><><>

ಬೆಂಗಳೂರಿನಲ್ಲಿ ಇದೇ ೨೭ರಿಂದ ಮೂರು ದಿನಗಳ ಕಾಲ ಗೆಫೆಕ್ಸ್ ಶೃಂಗಸಭೆ ನಡೆಯಲಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಈ ಮಾಹಿತಿ ನೀಡಿರುವ ಅವರು, ನಾವೀನ್ಯತೆಯನ್ನು ಪೋಷಿಸುವಲ್ಲಿ, ಜ್ಞಾನದ ಹಂಚಿಕೆಯನ್ನು ಸಾಧ್ಯವಾಗಿಸುವಲ್ಲಿ ಮತ್ತು ಕಾರ್ಯತಂತ್ರೀಯ ಸಹಯೋಗಗಳನ್ನು ಪ್ರೋತ್ಸಾಹಿಸುವತ್ತ ಗಮನವನ್ನು ಇರಿಸುವಲ್ಲಿ ಈ ಶೃಂಗಸಭೆ ಬೆಳಕು ಚೆಲ್ಲಲಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಸುಮಾರು ೨೦ ಸಾವಿರಕ್ಕೂ ಅಧಿಕ ಮಂದಿ ಈ ಶೃಂಗಸಭೆಯಲ್ಲಿ ಭಾಗವಹಿಸುವ ನಿರೀಕ್ಷೆಯಿದೆ ಎಂದು ತಿಳಿಸಿದ್ದಾರೆ. ಪರಿಸರ ವ್ಯವಸ್ಥೆಯಲ್ಲಿನ ಸೃಷ್ಟಿಕರ್ತರು, ಸ್ಟುಡಿಯೋಗಳು ಮತ್ತು ಉತ್ಸಾಹಿಗಳು ಪಾಲ್ಗೊಳ್ಳಲಿದ್ದು ಇದು ಅತ್ಯಂತ ಪ್ರಭಾವಶಾಲಿಯಾದ ಮೇಳವಾಗಲಿದೆ ಎಂದೂ ಪ್ರಿಯಾಂಕ್ ಖರ್ಗೆ ಅಭಿಪ್ರಾಯಪಟ್ಟಿದ್ದಾರೆ. ಕರ್ನಾಟಕದ ಮಾಹಿತಿ ತಂತ್ರಜ್ಞಾನ ಇಲಾಖೆ ಆಯೋಜಿಸಿರುವ ಭಾರತದ ಪ್ರಧಾನ ಎವಿಜಿಸಿ-ಎಕ್ಸ್‌ಆರ್ ಸಮ್ಮೇಳನವು ಅನಿಮೇಶನ್, ದೃಶ್ಯಪರಿಣಾಮಗಳು, ಗೇಮಿಂಗ್, ಕಾಮಿಕ್ಸ್ ಮತ್ತು ವಿಸ್ತ್ರತ ನೈಜತೆ ಬಗ್ಗೆ ಬೆಳಕು ಚೆಲ್ಲಲಿದೆ. ಇದೇ ೨೭ರಿಂದ ಮಾರ್ಚ್ ೧ರವರೆಗೆ ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಸಮ್ಮೇಳನ ಆಯೋಜಿಸಲಾಗಿದೆ.

<><><><>

ಜಲಸಂಪನ್ಮೂಲ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ನವದೆಹಲಿಯಲ್ಲಿಂದು ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಮತ್ತು ರಾಜ್ಯ ಖಾತೆ ಸಚಿವ ವಿ. ಸೋಮಣ್ಣ ಅವರನ್ನು ಭೇಟಿ ಮಾಡಿದ್ದಾರೆ. ಈ ವೇಳೆ ನೆನೆಗುದಿಗೆ ಬಿದ್ದಿರುವ ರಾಜ್ಯದ ಯೋಜನೆಗಳಿಗೆ ಅನುಮತಿ ಹಾಗೂ ಅನುದಾನ ನೀಡಲು ಕ್ರಮ ಕೈಗೊಳ್ಳುವಂತೆ ಮನವಿ ಸಲ್ಲಿಸಿದ್ದಾರೆ. ರಾಜ್ಯದ ಸಣ್ಣ ನೀರಾವರಿ ಸಚಿವ ಬೋಸರಾಜ್, ದೆಹಲಿಯಲ್ಲಿ ರಾಜ್ಯ ಸರಕಾರದ ವಿಶೇಷ ಪ್ರತಿನಿಧಿ ಟಿ.ಬಿ ಜಯಚಂದ್ರ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

<><><><>

ರಾಜ್ಯ ಸರ್ಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳು ಬಡವರಿಗೆ ಮಾತ್ರ ಸಿಗುವಂತಾಗಬೇಕು ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳ ಪುನರ್ ಪರಿಶೀಲನೆಗೆ ಸರ್ಕಾರದ ಹಂತದಲ್ಲೇ ನಿರ್ಧಾರ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ಸರ್ಕಾರಕ್ಕೆ ಹೊರೆಯಾಗಿದೆ ಎಂಬುದು ಗೊತ್ತಿದ್ದೇ, ಗ್ಯಾರಂಟಿ ಯೋಜನೆ ಜಾರಿಗೆ ತರಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಬಿಜೆಪಿ ನಾಯಕರು ಗ್ಯಾರಂಟಿ ಯೋಜನೆಗಳನ್ನು ಹತ್ತಿಕ್ಕಲು ಪ್ರಯತ್ನಿಸುತ್ತಿದ್ದಾರೆ ಎಂದು ದೂರಿದ್ದಾರೆ. ತೆರಿಗೆ ಪಾವತಿದಾರರು, ಸರ್ಕಾರಿ ನೌಕರರು ಸ್ವಯಂ ಪ್ರೇರಿತರಾಗಿ ಬಿಪಿಎಲ್ ಕಾರ್ಡ್ ಪ್ರಯೋಜನವನ್ನು ತಿರಸ್ಕರಿಸಿದ್ದಾರೆ ಎಂದು ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಬಸ್ ನಿರ್ವಾಹಕನ ಮೇಲಿನ ಹಲ್ಲೆಗೆ ಸಂಬಂಧಿಸಿದಂತೆ ವರದಿ ನೀಡಲು ಐಜಿಪಿ ಹಾಗೂ ಜಿಲ್ಲಾ ವರಿಷ್ಠಾಧಿಕಾರಿಗೆ ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ.

<><><><>

ಸ್ಥಳೀಯ ಮಟ್ಟದಲ್ಲಿ ಕೆಲಸ ಮಾಡುವವರಿಗೆ ಮಾತ್ರ ಪಕ್ಷದ ಜವಾಬ್ದಾರಿ ನೀಡಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಪಕ್ಷದಲ್ಲಿ ಕೆಲಸ ಮಾಡುವವರಿಗೆ ಮಾತ್ರ ಅವಕಾಶ ನೀಡಿ ಎಂದು ಎಐಸಿಸಿ ಆದೇಶ ನೀಡಿದೆ ಎಂದು ಹೇಳಿದ್ದಾರೆ. ಮೀಸಲಾತಿ ಹಿನ್ನೆಲೆಯಲ್ಲಿ ಮಹಿಳೆಯರಿಗೂ ಆದ್ಯತೆ ನೀಡಿ ಅವರನ್ನು ತಯಾರಿ ಮಾಡಲಾಗುತ್ತಿದೆ. ಈ ವಿಚಾರವಾಗಿ ಮುಖ್ಯಮಂತ್ರಿಗಳ ಅಭಿಪ್ರಾಯ ಪಡೆಯುತ್ತಿದ್ದು, ಈ ವಾರವೇ ಈ ಪಟ್ಟಿ ಅಂತಿಮಗೊಳಿಸಲಾಗುವುದು ಎಂದು ತಿಳಿಸಿದ್ದಾರೆ.

<><><><>

ಬೆಳಗಾವಿಯಲ್ಲಿ ಟಿಕೆಟ್ ವಿಷಯಕ್ಕೆ ಸಂಬಂಧಿಸಿದಂತೆ ಸಾರಿಗೆ ಇಲಾಖೆ ಬಸ್‌ನ ನಿರ್ವಾಹಕ ಹಾಗೂ ಚಾಲಕನ ಮೇಲೆ ಮರಾಠಿ ಭಾಷಿಕರು ನಡೆಸಿರುವ ಹಲ್ಲೆಯನ್ನು ಕರ್ನಾಟಕ ರಕ್ಷಣಾ ವೇದಿಕೆ ತೀವ್ರವಾಗಿ ಖಂಡಿಸಿದೆ. ಮರಾಠಿ ಭಾಷಿಕರ ದೌರ್ಜನ್ಯ ಖಂಡಿಸಿ ಕನ್ನಡ ಪರ ಸಂಘಟನೆಗಳು ಇಂದು ಪ್ರತ್ಯೇಕವಾಗಿ ಪ್ರತಿಭಟನೆ ನಡೆಸಿದವು. ಕರ್ನಾಟಕ ರಕ್ಷಣಾ ವೇದಿಕೆ ಅಧ್ಯಕ್ಷ ನಾರಾಯಣಗೌಡ ಮಾತನಾಡಿ, ಹಲ್ಲೆಕೋರರ ಮೇಲೆ ಗೂಂಡಾ ಕಾಯ್ದೆ ಪ್ರಕರಣ ದಾಖಲಿಸಿಕೊಂಡು ಗಡಿ ಪಾರು ಮಾಡಬೇಕು ಎಂದು ಆಗ್ರಹಿಸಿದ್ದಾರೆ. ಕನ್ನಡಿಗರು ಸಹಜೀವನ ಬಯಸುವವರು. ಅದನ್ನು ನ್ಯೂನ್ಯತೆ ಎಂದು ಭಾವಿಸಿದರೆ ಬೀದಿಗಿಳಿಯಬೇಕಾಗುತ್ತದೆ ಎಂದು ಎಚ್ಚರಿಸಿದ್ದಾರೆ. ಈ ನಡುವೆ ಹಲ್ಲೆಗೊಳಗಾದ ನಿರ್ವಾಹಕನ ವಿರುದ್ಧ ಪೋಕ್ಸೋ ಪ್ರಕರಣ ದಾಖಸಿಕೊಂಡ ಬೆಳಗಾವಿ ಮಾರಿಹಾಳ ಪೊಲೀಸ್ ಠಾಣೆಯ ಸಿಪಿಐ ಗುರುರಾಜ್ ಕಲ್ಯಾಣಶೆಟ್ಟಿ ಎಂಬವರನ್ನು ಪೊಲೀಸ್ ಆಯುಕ್ತ ಯಡಾ ಮಾರ್ಟಿನ್ ವರ್ಗಾವಣೆ ಮಾಡಿ ಆದೇಶ ಹೊರಡಿಸಿದ್ದಾರೆ.

<><><><>

ಬೆಂಗಳೂರು ನಗರದ ನೀರು ನಿರ್ವಹಣೆಗೆ ಕೃತಕ ಬುದ್ಧಿಮತ್ತೆ ತಂತ್ರಜ್ಞಾನವನ್ನು ಸದ್ಬಳಕೆ ಮಾಡಿಕೊಂಡು ಬೇಸಿಗೆಯಲ್ಲಿ ಜಲಕ್ಷಾಮ ತಡೆಗೆ ವ್ಯಾಪಕ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಬೆಂಗಳೂರು ನೀರು ಸರಬರಾಜು ಮತ್ತು ಜಲಮಂಡಳಿ ಅಧ್ಯಕ್ಷ ಡಾ. ವಿ. ರಾಮ್ ಪ್ರಸಾತ್ ಮನೋಹರ್ ಹೇಳಿದ್ದಾರೆ. ಭಾರತೀಯ ವಿಜ್ಞಾನ ಮಂದಿರದಲ್ಲಿ ಇಂಡೋ ಜರ್ಮನ್ ಸೈನ್ಸ್ ಅಂಡ್ ಟೆಕ್ನಾಲಜಿ ಸೆಂಟರ್ ನಿಂದ ಆಯೋಜಿಸಲಾದ "ಸುಸ್ಥಿರ ಆವಾಸ ಸ್ಥಾನ" ಕುರಿತ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಅಂತರ್ಜಲ ಸದ್ಬಳಕೆಗಾಗಿ ಬಿ.ಡಬ್ಲ್ಯು.ಎಸ್.ಎಸ್.ಬಿ ಮತ್ತು ಕೇಂದ್ರ ಅಂತರ್ಜಲ ಪ್ರಾಧಿಕಾರದಿಂದ ಅಂತರ್ಜಲ ಸಂರಕ್ಷಣೆಗಾಗಿ ಕಾರ್ಯಪಡೆ ರಚಿಸಲಾಗಿದೆ. ಈ ಮೂಲಕ ಸಾಂಪ್ರಾಯಿಕ ಕೊಳವೆ ಬಾವಿಗಳ ಬಗ್ಗೆ ನಿಗಾ ವಹಿಸಲಾಗಿದೆ. ಅಂತರ್ಜಲ ದುರ್ಬಳಕೆ ತಡೆಗಟ್ಟಲು

ಅತ್ಯಾಧುನಿಕ ಕೃತಕ ಬುದ್ಧಿಮತ್ತೆ ತಂತ್ರಜ್ಞಾನವನ್ನು ಬಳಕೆ ಮಾಡಿಕೊಳ್ಳಲಾಗಿದೆ. ಈಗಾಗಲೇ ಅಂತರ್ಜಲ ಮಟ್ಟದ ಬಗ್ಗೆ ಮಾಪನ ಮಾಡಲಾಗಿದ್ದು, ಬೇಸಿಗೆಯಲ್ಲಿ ಅಗತ್ಯಕ್ಕೆ ಅನುಗುಣವಾಗಿ ಅಂತರ್ಜಲವನ್ನು ಸಂರಕ್ಷಿಸಿ ಸದ್ಬಳಕೆಗಾಗಿ ಸೂಕ್ತ ಕಾರ್ಯತಂತ್ರ ರೂಪಿಸಲಾಗಿದೆ. ಮುಂಬರುವ ದಿನಗಳಲ್ಲಿ ನೀರಿನ ಭದ್ರತೆ ಅತ್ಯಂತ ಅಗತ್ಯವಾಗಿದ್ದು, ಇದಕ್ಕಾಗಿ ಹೊಸ ತಂತ್ರಜ್ಞಾನವನ್ನು ಬಳಸಿಕೊಳ್ಳುವ ಅಗತ್ಯವಿದೆ ಎಂದು ಪ್ರತಿಪಾದಿಸಿದ್ದಾರೆ. ಬೆಂಗಳೂರು ನಗರದಲ್ಲಿ ಬೇಸಿಗೆ ಸಮಯದಲ್ಲಿ ಕುಡಿಯುವ ನೀರು ಪೂರೈಸುವುದು ಸವಾಲಿನ ಕೆಲಸವಾಗಿದ್ದು, ಕಳೆದ ವರ್ಷ ೧೦೦ ದಿನಗಳ ಕಾಲ ಮಳೆಯಾಗಿರಲಿಲ್ಲ. ಇದೀಗ ಅಂತರ್ಜಲ ಕುಸಿಯುತ್ತಿದ್ದು, ಇದು ಜಾಗತಿಕ ಸಮಸ್ಯೆಯಾಗಿದೆ. ಹವಾಮಾನ ಬದಲಾವಣೆ ಕುರಿತ ವಿಶ್ವಸಂಸ್ಥೆಯ ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಸಾಧಿಸಲು ಬೆಂಗಳೂರು ನಗರ ಜಾಗತಿಕ ಮಟ್ಟದಲ್ಲಿ ಅತ್ಯಾಧುನಿಕ ಅಭ್ಯಾಸಗಳನ್ನು ಅಳವಡಿಸಿಕೊಳ್ಳಲಿದೆ ಎಂದು ಹೇಳಿದರು.

<><><><>

ದಾವಣಗೆರೆ ಜಿಲ್ಲೆಯ ೬ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಷಣ್ಮುಖಪ್ಪ ತಿಳಿಸಿದ್ದಾರೆ. ಮಾಯಕೊಂಡ, ಅಣಜಿ, ಹೊಳೆ ಸಿರಿಗೆರೆ, ಕೂಲಂಬಿ, ಬಿಳಿಚೋಡು ಮತ್ತು ಬಸವಾಪಟ್ಟಣ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಕುರಿತ ಪ್ರಸ್ತಾವನೆಗೆ ಇಲಾಖೆಯ ಅನುಮೋದನೆ ಸಿಗುವ ವಿಶ್ವಾಸವಿದೆ ಎಂದು ಹೇಳಿದ್ದಾರೆ. ಪ್ರಸ್ತುತ ೪ ಸಮುದಾಯ ಆರೋಗ್ಯ ಕೇಂದ್ರಗಳು ಜಿಲ್ಲೆಯಲ್ಲಿದ್ದು, ಮತ್ತೆ ೬ ಕೇಂದ್ರಗಳಿಗೆ ಅನುಮೋದನೆ ದೊರೆತರೆ ಜನರಿಗೆ ದಿನದ ೨೪ ಗಂಟೆಗಳ ಕಾಲ ವೈದ್ಯಕೀಯ ಸೇವೆ ಲಭಿಸಲಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

<><><><>

ಮಹಾಶಿವರಾತ್ರಿ ಅಂಗವಾಗಿ ಉತ್ತರಕನ್ನಡ ಜಿಲ್ಲೆಯ ಪ್ರಸಿದ್ಧ ಧಾರ್ಮಿಕ ಕ್ಷೇತ್ರ ಗೋಕರ್ಣ ಮತ್ತು ಮುರುಡೇಶ್ವರದಲ್ಲಿ ನಾಳೆ ಅಹೋರಾತ್ರಿ ಜಾಗರಣೋತ್ಸವಕ್ಕೆ ಜಿಲ್ಲಾಡಳಿತ ಹಾಗೂ ಪ್ರವಾಸೋದ್ಯಮ ಇಲಾಖೆ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಮುರುಡೇಶ್ವರದಲ್ಲಿ ಬೃಹತ್ ಶಿವನ ಮೂರ್ತಿಗೆ ಲೇಸರ್ ಶೋ ನಡೆಯಲಿದ್ದು, ಲೇಸರ್ ಬೆಳಕಿನಲ್ಲಿ ಕಂಗೊಳಿಸುವ ಶಿವನ ಮೂರ್ತಿ ಭಕ್ತರನ್ನು ಆಕರ್ಷಿಸಲಿದೆ. ಇನ್ನು ಪುರಾಣ ಪ್ರಸಿದ್ಧ ಗೋಕರ್ಣದ ಮುಖ್ಯ ಸಮುದ್ರ ತೀರದಲ್ಲಿ ದಿನಾಂಕ ೨೬, ೨೭ ಹಾಗೂ ೨೮ ರಂದು ಮೂರು ದಿನಗಳ ಕಾಲ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಮಹಾಶಿವರಾತ್ರಿ ಹಬ್ಬದ ದಿನವಾದ ನಾಳೆ ಚಿಕ್ಕಬಳ್ಳಾಪುರ ತಾಲ್ಲೂಕಿನ ಸುಪ್ರಸಿದ್ಧ ನಂದಿಯ ಭೋಗನಂದೀಶ್ವರ ದೇವಾಲಯ ಹಾಗೂ ನಂದಿಬೆಟ್ಟದ ಯೋಗ ನಂದೀಶ್ವರ ದೇವಾಲಯದಲ್ಲಿ ವಿಶೇಷಪೂಜೆ, ಅಲಂಕಾರ, ತೀರ್ಥಪ್ರಸಾದ ವಿನಿಯೋಗದ ಜೊತೆಗೆ ಅನ್ನ ಸಂತರ್ಪಣೆ ನಡೆಯಲಿದೆ. ಇದೇ ೨೭ ರಂದು ನಂದಿ ಜಾತ್ರಾ ಮಹೋತ್ಸವ ನೆರವೇರಲಿದ್ದು, ಜೋಡಿ ಬ್ರಹ್ಮರಥೋತ್ಸವ ನಡೆಯಲಿದೆ.

<><><><>

ಸಂಕ್ಷಿಪ್ತ ಸುದ್ದಿಗಳು

1. ನಾಡ ಕಚೇರಿಯಲ್ಲಿ ಕಂದಾಯ ಅಧಿಕಾರಿಗಳು ಸದಾ ಇರಬೇಕು. ಕಚೇರಿಯಲ್ಲಿದ್ದು, ಬಂದ ನಾಗರಿಕರ ಜೊತೆಗೆ ಸೌಮ್ಯ ರೀತಿಯಿಂದ ವರ್ತಿಸಿ ಕಾರ್ಯನಿರ್ವಹಿಸಬೇಕು ಎಂದು ಯಾದಗಿರಿ ಜಿಲ್ಲೆಯ ಗುರುಮಠಕಲ್ ಮತಕ್ಷೇತ್ರದ ಶಾಸಕ ಶರಣಗೌಡ ಕಂದಕೂರ್ ಕಂದಾಯ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

2. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲೂಕಿನ ವಿವಿಧ ಹೋಟೆಲ್ ಹಾಗೂ ಡಾಬಗಳಿಗೆ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ಅಧಿಕಾರಿಗಳು ಭೇಟಿ ನೀಡಿ, ಸ್ವಚ್ಛತೆ ಹಾಗೂ ನೈರ್ಮಲ್ಯತೆ ಕಾಯ್ದುಕೊಳ್ಳದ ೩ ಹೋಟೆಲ್, ಡಾಬಾಗಳಿಗೆ ನೋಟಿಸ್ ಜಾರಿಗೊಳಿಸಿ ೭ ಸಾವಿರ ರೂಪಾಯಿಗಳ ದಂಡ ವಿಧಿಸಿದ್ದಾರೆ.
3. ಸರ್ಕಾರಿ ಶಾಲೆಯಲ್ಲಿನ ವಿದ್ಯಾರ್ಥಿಗಳು ಉತ್ತಮ ಗುಣಮಟ್ಟದ ಶಿಕ್ಷಣವನ್ನು ಪಡೆದು ಜೀವನದ ಗುರಿ ಮುಟ್ಟಬೇಕು ಎಂದು ಶ್ರೀನಿವಾಸಪುರ ಶಾಸಕ ಜಿ.ಕೆ.ವೆಂಕಟಶಿವಾರೆಡ್ಡಿ ತಿಳಿಸಿದ್ದಾರೆ.
4. ವಿಜಯನಗರದಲ್ಲಿ ಹಂಪಿ ಉತ್ಸವ ನಿಮಿತ್ತ ಸಾರ್ವಜನಿಕರಿಗೆ ಉತ್ಸವದ ಬಗ್ಗೆ ಮಾಹಿತಿ ನೀಡುವ ನಿಟ್ಟಿನಲ್ಲಿ ಇಂದು ಬೈಕ್ ರ್‍ಯಾಲಿ ಹಮ್ಮಿಕೊಳ್ಳಲಾಗಿತ್ತು. ರ್‍ಯಾಲಿಯಲ್ಲಿ ಜಿಲ್ಲೆಯ ಹಾಗೂ ಹೊಸಪೇಟೆಯ ತಾಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>